**All India Radio: Bangalore**
**National Bulletin In Kannada**
**23.06.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

- ರಾಯಪುರದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಕ್ಸಲ್‌ವಾದ ತಡೆ ಕುರಿತ ಪರಿಶೀಲನಾ ಸಭೆ
- ಇರಾನ್ ಇಸ್ರೇಲ್ ಸಂಘರ್ಷ ತಿಳಿಗೊಳಿಸಿ ಶಾಂತಿ ಸ್ಥಾಪಿಸಲು ತುರ್ತು ಭದ್ರತಾ ಮಂಡಳಿ ಸಭೆಯಲ್ಲಿ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಕರೆ
- ನಾಲ್ಕು ರಾಜ್ಯಗಳ ಐದು ವಿಧಾನಸಭಾ ಸ್ಥಾನಗಳ ಉಪಚುನಾವಣೆಯ ಮತ ಎಣಿಕೆ ಇಂದು
- ಸಂಸತ್ತು ಮತ್ತು ರಾಜ್ಯ ಶಾಸಕಾಂಗ ಸಂಸ್ಥೆಗಳ ಅಂದಾಜು ಸಮಿತಿಗಳ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಇಂದು ಮುಂಬೈನಲ್ಲಿ ಆರಂಭ
- ಏಷ್ಯಾನ್ ಪ್ಯಾರಾ ಬ್ಯಾಡ್ಮಿಂಟನ್ ಚಾಂಪಿಯನ್ ಶಿಪ್ : ಭಾರತಕ್ಕೆ ೪ ಚಿನ್ನ ಸೇರಿದಂತೆ ೧೭ ಪದಕ

<><><><>

ನಕ್ಸಲ್‌ವಾದದ ವಿರುದ್ಧ ಕಾರ್ಯಾಚರಣೆ ಕುರಿತಂತೆ ರಾಯಪುರದಲ್ಲಿ ನಿನ್ನೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ಪರಿಶೀಲನಾ ಸಬೆ ನಡೆಯಿತು. ಈ ಸಭೆಯಲ್ಲಿ ನಕ್ಸಲ್ವಾದದಿಂದ ಹೆಚ್ಚು ಪೀಡಿತ ರಾಜ್ಯಗಳಾದ ಛತ್ತೀಸ್‌ಗಢ, ಆಂಧ್ರಪ್ರದೇಶ, ತೆಲಂಗಾಣ, ಮಧ್ಯಪ್ರದೇಶ, ಮಹಾರಾಷ್ಟ್ರ, ಜಾರ್ಖಂಡ್ ಮತ್ತು ಒಡಿಶಾ ರಾಜ್ಯಗಳ ಪೊಲೀಸ್ ಮಹಾನಿರ್ದೇಶಕರು, ಹೆಚ್ಚುವರಿ ಮಹಾನಿರ್ದೇಶಕರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಸಭೆಯಲ್ಲಿ ಮಾತನಾಡಿದ ಕೇಂದ್ರ ಸಚಿವ ಅಮಿತ್ ಶಾ, ಮುಂದಿನ ವರ್ಷ ಮಾರ್ಚ್ ೩೧ರೊಳಗೆ ದೇಶವನ್ನು ನಕ್ಸಲ್ವಾದದಿಂದ ಸಂಪೂರ್ಣ ಮುಕ್ತಗೊಳಿಸುವ ಉದ್ದೇಶವನ್ನು ಸರ್ಕಾರ ಸಾಧಿಸಲಿದೆ ಎಂದು ಪುನರುಚ್ಚರಿಸಿದರು.

ಈ ಕುರಿತು ಒಂದು ವರದಿ: ಅಭಯ್ (೪೧ ಸೆಕೆಂಡ್‌ಗಳು)

ನಕ್ಸಲ್ವಾದದ ಹಾದಿಯಲ್ಲಿ ದಾರಿತಪ್ಪಿ ಹೋಗಿರುವ ಯುವಕರು ಶಸ್ತ್ರತ್ಯಾಗ ಮಾಡಿ, ಛತ್ತೀಸ್‌ಗಢ ಸರ್ಕಾರದ ಶರಣಾಗತಿ ನೀತಿಯನ್ನು ಅನುಸರಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ ನೀಡಿದರು. ಶರಣಾದ ನಕ್ಸಲರಿಗೆ ಕೇಂದ್ರ ಮತ್ತು ಛತ್ತೀಸ್‌ಗಢ ಸರ್ಕಾರಗಳು ನೀಡಿರುವ ಎಲ್ಲಾ ಆಶ್ವಾಸನೆಗಳನ್ನು ನೆರವೇರಿಸಲಾಗುವುದು ಮತ್ತು ಹೆಚ್ಚಿನ ಸಹಾಯವನ್ನು ಒದಗಿಸಲು ಪ್ರಯತ್ನಿಸಲಾಗುವುದು ಎಂದು ಅವರು ಭರವಸೆ ನೀಡಿದರು. ಪ್ರತಿ ವರ್ಷ ಮಳೆಗಾಲದಲ್ಲಿ ವಿಶ್ರಾಂತಿಯಲ್ಲಿರುವ ನಕ್ಸಲರಿಗೆ ಈ ಬಾರಿಯ ಮಳೆಗಾಲದಲ್ಲಿ ಶಾಮತಿಯುತವಾಗಿ ವಿಶ್ರಾಂತಿ ತೆಗೆದುಕೊಳ್ಳಲು ಸಾಧ್ಯವಿಲ್ಲ. ಭದ್ರತಾ ಪಡೆಯ ಕಾರ್ಯಾಚರಣೆಗಳು ನಕ್ಸಲರನ್ನು ತೀವ್ರ ಒತ್ತಡಕ್ಕೆ ಒಳಪಡಿಸಲಿವೆ. ನಮ್ಮ ಭದ್ರತಾ ಪಡೆಗಳ ಧೈರ್ಯ ಮತ್ತು ಗುಪ್ತಚರ ಸಂಸ್ಥೆಗಳ ಯೋಜನೆಗಳ ಆಧಾರದಲ್ಲಿ, ದೇಶವನ್ನು ನಕ್ಸಲ್ವಾದದ ಸಮಸ್ಯೆಯಿಂದ ಮುಕ್ತಗೊಳಿಸುವ ಗುರಿಯನ್ನು ಸಾಧಿಸಬಹುದು ಎಂದು ಕೇಂದ್ರ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

<><><>

ನವದೆಹಲಿಯಲ್ಲಿ ಇಂದು ಸಂಜೆ ನಡೆಯುವ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಾಡಿದ ಭಾಷಣಗಳನ್ನು ಆಧರಿಸಿದ "ವಿಂಗ್ಸ್ ಟು ಅವರ್ ಹೋಪ್ಸ್ - ಸಂಪುಟ ೨" ಎಂಬ ಪುಸ್ತಕವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಿಡುಗಡೆ ಮಾಡಲಿದ್ದಾರೆ. ೫೧ ಭಾಷಣಗಳ ಈ ಸಂಕಲನ ರಾಷ್ಟ್ರಪತಿಗಳು ತಮ್ಮ ಎರಡನೇ ವರ್ಷದ ಅಧಿಕಾರಾವಧಿಯಲ್ಲಿ ನೀಡಿದ ದೃಷ್ಟಿಕೋನ, ತತ್ವಶಾಸ್ತ್ರ ಮತ್ತು ಆದ್ಯತೆಗಳ ಬಗೆಗಿನ ವಿಚಾರ ನೀಡುತ್ತದೆ. ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವ ಡಾ. ಎಲ್. ಮುರುಗನ್ ಕೂಡ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಈ ಪುಸ್ತಕವನ್ನು ಹಿಂದಿ ಮತ್ತು ಇಂಗ್ಲಿಷ್ ಎರಡು ಭಾಷೆಗಳಲ್ಲಿ ಬಿಡುಗಡೆ ಮಾಡಲಾಗುವುದು, ಜೊತೆಗೆ ಇ-ಆವೃತ್ತಿಯನ್ನು ಸಹ ಬಿಡುಗಡೆಗೊಳಿಸಲಾಗುವುದು.

<><><>

ಇರಾನ್‌ನ ಅಣು ಸೌಲಭ್ಯಗಳ ಮೇಲೆ ಅಮೆರಿಕದ ಸೇನೆಯ ದಾಳಿ ಬಳಿಕ ಉಂಟಾದ ಬಿಕ್ಕಟ್ಟನ್ನು ನಿವಾರಿಸಲು ತಕ್ಷಣದ ಕ್ರಮ ತೆಗೆದುಕೊಳ್ಳಬೇಕೆಂದು ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಅಂಟೊನಿಯೊ ಗುಟೆರಸ್ ಅವರು ಶಾಂತಿಗಾಗಿ ಕರೆ ನೀಡಿದ್ದಾರೆ. ನ್ಯೂಯಾರ್ಕ್‌ನ ವಿಶ್ವಸಂಸ್ಥೆ ಪ್ರಧಾನ ಕಚೇರಿಯಲ್ಲಿ ನಡೆದ ಭದ್ರತಾ ಮಂಡಳಿಯ ತುರ್ತು ವಿಶೇಷ ಅಧಿವೇಶನದಲ್ಲಿ ಅವರು ಮಾತನಾಡಿದರು.

ಈ ಪ್ರದೇಶದಲ್ಲಿ ಪ್ರತೀಕಾರದ ಭೀತಿಯ ಜೊತೆಗೆ ಆಳವಾದ ಸಂಘರ್ಷ ಉಂಟಾಗುವ ಅಪಾಯವಿದೆ ಎಂದ ಅವರು, ಇರಾನ್ ಇಸ್ರೇಲ್ ಸಂಘರ್ಷ ತಿಳಿಗೊಳಿಸಿ ಶಾಂತಿ ಸ್ಥಾಪಿಸುವ ಅಗತ್ಯವಿದೆ. ಅಮೆರಿಕದ ಈ ದಾಳಿ, ಈ ಭಾಗದಲ್ಲಿ ದಿನೇದಿನೆ ಹದಗೆಡುತ್ತಿರುವ ಸ್ಥಿತಿಗೆ ಮತ್ತೊಂದು ಅಪಾಯಕಾರಿಯಾದ ತಿರುವಾಗಿದೆ ಎಂದು ಹೇಳಿದ್ದಾರೆ. ಇರಾನ್‌ನ ಪರಮಾಣು ಕಾರ್ಯಕ್ರಮದ ಬಗ್ಗೆ "ವಿಶ್ವಾಸಾರ್ಹ, ಸಮಗ್ರ ಹಾಗೂ ಪರಿಶೀಲನೀಯ ಪರಿಹಾರ" ನೀಡುವಂತೆ ಅವರು ಕರೆ ನೀಡಿದರು. ರಷ್ಯಾ, ಚೀನಾ ಮತ್ತು ಪಾಕಿಸ್ತಾನವು ಈ ತುರ್ತು ಸಭೆಯನ್ನು ಕರೆದಿದ್ದು, ಕದನ ವಿರಾಮದ ಬೇಡಿಕೆಯೊಂದಿಗೆ ಪ್ರಸ್ತಾವನೆ ಸಲ್ಲಿಸಿತು.

<><><><>

ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಪಬಿತ್ರ ಮಾರ್ಗರಿಟಾ ಅವರು ಇರಾನ್‌ನ ಮಷ್ಹದ್‌ನಿಂದ ವಿಶೇಷ ವಿಮಾನದ ಮೂಲಕ ಕಳೆದ ರಾತ್ರಿ ನವದೆಹಲಿಗೆ ಆಗಮಿಸಿದ ೨೮೫ ಭಾರತೀಯರನ್ನು ಸ್ವಾಗತಿಸಿದರು. ಈವರೆಗೆ “ಆಪರೇಶನ್ ಸಿಂಧು” ಅಡಿಯಲ್ಲಿ ಒಟ್ಟು ೧ ಸಾವಿರದ ೭೧೩ ಭಾರತೀಯರನ್ನು ಇರಾನ್‌ನಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ. ಮುಂದಿನ ಎರಡು ದಿನಗಳಲ್ಲಿ ಇರಾನಿನಿಂದ ಇನ್ನು ೨ ರಿಂದ ೩ ವಿಮಾನಗಳು ಭಾರತಕ್ಕೆ ಆಗಮಿಸಲಿವೆ ಎಂದು ಅವರು ಮಾಹಿತಿ ನೀಡಿದರು. ಇರಾನ್ ಮತ್ತು ಇಸ್ರೇಲ್‌ನಲ್ಲಿ ವಾಸಿಸುತ್ತಿರುವ ಎಲ್ಲಾ ಭಾರತೀಯರೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ ಎಂದು ಅವರು ಸ್ಪಷ್ಟಪಡಿಸಿದರು.

ಧ್ವನಿ : ಪಬಿತ್ರ ಮಾರ್ಗರಿಟಾ (೧೮ ಸೆಕೆಂಡ್‌ಗಳು)

<><><><>

ನಾಲ್ಕು ರಾಜ್ಯಗಳ ಐದು ವಿಧಾನಸಭಾ ಸ್ಥಾನಗಳ ಉಪಚುನಾವಣೆಯ ಮತ ಎಣಿಕೆ ಇಂದು ನಡೆಯಲಿದೆ. ಗುಜರಾತ್‌ನಲ್ಲಿ ವಿಸಾವದರ್ ಮತ್ತು ಕಾಡಿ ಕ್ಷೇತ್ರಗಳಿಗೆ ಎಣಿಕೆ ನಡೆಯಲಿದೆ. ಕೇರಳದ ನೀಲಂಬೂರ್ ಸ್ಥಾನ, ಪಶ್ಚಿಮ ಬಂಗಾಳದ ಕಾಳಿಗಂಜ್ ಮತ್ತು ಪಂಜಾಬ್‌ನ ಲುಧಿಯಾನ ಪಶ್ಚಿಮಕ್ಕೂ ಮತ ಎಣಿಕೆ ನಡೆಯಲಿದೆ.

<><><><>

ಕಳೆದ ಎರಡು ವಾರಗಳಿಂದ ಪಶ್ಚಿಮ ಏಷ್ಯಾದಲ್ಲಿ ಉದ್ಭವಗೊಂಡಿರುವ ಭೌಗೋಳಿಕ ರಾಜಕೀಯ ಪರಿಸ್ಥಿತಿಯನ್ನು ಸರ್ಕಾರ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ಕಳೆದ ಕೆಲವು ವರ್ಷಗಳಿಂದ ತನ್ನ ಇಂಧನ ಸರಬರಾಜುಗಳನ್ನು ವೈವಿಧ್ಯಗೊಳಿಸಿದೆ ಮತ್ತು ಈಗ ಹಾರ್ಮುಜ್ ಜಲಸಂಧಿಯ ಮೂಲಕ ಹೆಚ್ಚಿನ ಪ್ರಮಾಣದ ಇಂಧನ ಸರಬರಾಜುಗಳು ಬರುತ್ತಿಲ್ಲ ಎಂದು ಹೇಳಿದ್ದಾರೆ.

ತೈಲ ಮಾರುಕಟ್ಟೆ ಕಂಪನಿಗಳು ಅವಶ್ಯಕ ಸರಬರಾಜುಗಳನ್ನು ಹೊಂದಿವೆ ಮತ್ತು ಹಲವಾರು ಮಾರ್ಗಗಳಿಂದ ಇಂಧನ ಸರಬರಾಜುಗಳನ್ನು ಪಡೆಯುತ್ತಲೇ ಇವೆ ಎಂದು ಅವರು ಮಾಹಿತಿ ನೀಡಿದರು.

<><><><>

ಕಳೆದ ಎರಡು ವಾರಗಳಿಂದ ಪಶ್ಚಿಮ ಏಷ್ಯಾದಲ್ಲಿ ಉದ್ಭವಗೊಂಡಿರುವ ಭೌಗೋಳಿಕ ರಾಜಕೀಯ ಪರಿಸ್ಥಿತಿಯನ್ನು ಸರ್ಕಾರ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ಕಳೆದ ಕೆಲವು ವರ್ಷಗಳಿಂದ ತನ್ನ ಇಂಧನ ಸರಬರಾಜುಗಳನ್ನು ವೈವಿಧ್ಯಗೊಳಿಸಿದೆ ಮತ್ತು ಈಗ ಹಾರ್ಮುಜ್ ಜಲಸಂಧಿಯ ಮೂಲಕ ಹೆಚ್ಚಿನ ಪ್ರಮಾಣದ ಇಂಧನ ಸರಬರಾಜುಗಳು ಬರುತ್ತಿಲ್ಲ ಎಂದು ಹೇಳಿದ್ದಾರೆ. ತೈಲ ಮಾರುಕಟ್ಟೆ ಕಂಪನಿಗಳು ಅವಶ್ಯಕ ಸರಬರಾಜುಗಳನ್ನು ಹೊಂದಿವೆ ಮತ್ತು ಹಲವಾರು ಮಾರ್ಗಗಳಿಂದ ಇಂಧನ ಸರಬರಾಜುಗಳನ್ನು ಪಡೆಯುತ್ತಲೇ ಇವೆ ಎಂದು ಅವರು ಮಾಹಿತಿ ನೀಡಿದರು.

ಧ್ವನಿ : ಹರ್ದೀಪ್ ಸಿಂಗ್ ಪುರಿ (೨೩ ಸೆಕೆಂಡ್‌ಗಳು)

<><><><>

ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಇಂದು ಮಾತುಕತೆಗಳಿಗಾಗಿ ಮೋಸ್ಕೋಗೆ ಆಗಮಿಸಿದ್ದಾರೆ. ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹಾಗೂ ಇತರ ಹಿರಿಯ ಅಧಿಕಾರಿಗಳೊಂದಿಗೆ, ಅಮೆರಿಕದ ಸೈನಿಕ ದಾಳಿಯ ನಂತರ ಉಂಟಾಗಿರುವ ಪ್ರಾದೇಶಿಕ ಹಾಗೂ ಅಂತಾರಾಷ್ಟ್ರೀಯ ಬೆಳವಣಿಗೆಗಳ ಬಗ್ಗೆ ಸಮಾಲೋಚನೆ ನಡೆಸಲಿದ್ದಾರೆ.

ನಿನ್ನೆ ಟರ್ಕಿಯ ಇಸ್ತಾಂಬುಲ್‌ನಲ್ಲಿ ನಡೆದ ಸಮ್ಮೇಳನದ ಸಂದರ್ಭದಲ್ಲಿ ಸುದ್ದಿಗೋಷ್ಠಿಯಲ್ಲಿ ಅವರು, 'ಇರಾನ್ ಮತ್ತು ರಷ್ಯಾ ಕಾರ್ಯತಂತ್ರ ಪಾಲುಗಾರಿಕೆಯನ್ನು ಹೊಂದಿದ್ದು, ಸದಾ ಪರಸ್ಪರ ಸಲಹೆ ಹಾಗೂ ವಿಚಾರ ವಿನಿಮಯ ಮಾಡಿಕೊಳ್ಳುತ್ತವೆ ಎಂದು ಹೇಳಿದರು.

<><><><>

ಸಂಸತ್ತು ಮತ್ತು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಶಾಸಕಾಂಗ ಸಂಸ್ಥೆಗಳ ಅಂದಾಜು ಸಮಿತಿಗಳ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಇಂದು ಮುಂಬೈನಲ್ಲಿ ಆರಂಭವಾಗಲಿದೆ. ಆಡಳಿತದಲ್ಲಿ ದಕ್ಷತೆ ಮತ್ತು ಆರ್ಥಿಕತೆಯನ್ನು ಖಚಿತಪಡಿಸಿಕೊಳ್ಳಲು ಬಜೆಟ್ ಅಂದಾಜುಗಳ ಪರಿಣಾಮಕಾರಿ ಮೇಲ್ವಿಚಾರಣೆ ಮತ್ತು ಪರಿಶೀಲನೆಯಲ್ಲಿ ಅಂದಾಜು ಸಮಿತಿಯ ಪಾತ್ರದ ಕುರಿತು ಚರ್ಚೆಗಳು ನಡೆಯಲಿವೆ. ಅಂದಾಜು ಸಮಿತಿಯ ಕಾರ್ಯನಿರ್ವಹಣೆಯ ೭೫ನೇ ವಾರ್ಷಿಕೋತ್ಸವವನ್ನು ಗುರುತಿಸಲು ಈ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್ ಅವರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಸಂಸತ್ತಿನ ಮತ್ತು ಎಲ್ಲಾ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಶಾಸಕಾಂಗಗಳ ಅಂದಾಜು ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರು ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ.

<><><><>

ಥೈಲ್ಯಾಂಡ್‌ನಲ್ಲಿ ನಡೆದ ೨೦೨೫ರ ಏಷ್ಯನ್ ಪ್ಯಾರಾ ಬ್ಯಾಡ್ಮಿಂಟನ್ ಚಾಂಪಿಯನ್‌ಷಿಪ್‌ನಲ್ಲಿ ಭಾರತೀಯ ಶಟ್ಲರ್‌ಗಳು ಒಟ್ಟು ೨೭ ಪದಕಗಳನ್ನು ಗೆದ್ದಿದ್ದಾರೆ. ಈ ಪದಕಗಳಲ್ಲಿ ನಾಲ್ಕು ಚಿನ್ನ, ೧೦ ಬೆಳ್ಳಿ ಮತ್ತು ೧೩ ಕಂಚು ಪದಕಗಳು ಸೇರಿವೆ. ಇದುವರೆಗೆ ಈ ಪಂದ್ಯಾವಳಿಯಲ್ಲಿ ಭಾರತ ಕಂಡ ಅತ್ಯುತ್ತಮ ಸಾಧನೆಯಿದು. ಪದಕ ವಿಜೇತರಲ್ಲಿ ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನ ಬಂಗಾರ ವಿಜೇತ ನಿತೇಶ್ ಕುಮಾರ್, ಬೆಳ್ಳಿ ವಿಜೇತೆ ತುಳಸಿಮತಿ ಮುರುಗೇಶನ್ ಮತ್ತು ಕಂಚು ವಿಜೇತೆ ಮನೀಷಾ ರಾಮದಾಸ್ ಸೇರಿದ್ದಾರೆ. ಈ ಚಾಂಪಿಯನ್‌ಷಿಪ್ ಜೂನ್ ೧೭ರಿಂದ ೨೨ರ ವರೆಗೆ ಥೈಲ್ಯಾಂಡ್‌ನಲ್ಲಿ ನಡೆಯಿತು.

<><><><>

ಲೀಡ್ಸ್‌ನ ಹೆಡಿಂಗ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಕ್ರಿಕೆಟ್ ಟ್ರೋಫಿಯ ೪ನೇ ದಿನದಾಟದಲ್ಲಿ ಇಂದು, ಭಾರತ ತಂಡವು ೯೬ ರನ್‌ಗಳ ಮುನ್ನಡೆಯೊಂದಿಗೆ ಎರಡನೇ ಇನ್ನಿಂಗ್ಸ್ ಅನ್ನು ಪುನರಾರಂಭಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>